**ದಿನಾಂಕ: 28.8.2018ರಂದು ಬೆಳಗ್ಗೆ 10 ಗಂಟೆಗೆ ವಿಧಾನಸೌಧ, 3ನೇ ಮಹಡಿ, ಕೊಠಡಿ ಸಂಖ್ಯೆ: 334ರಲ್ಲಿ ರಾಜ್ಯ ಸರ್ಕಾರದ ಮುಖ್ಯಕಾರ್ಯದರ್ಶಿಗಳಾದ ಶ್ರೀ ಟಿ.ಎಂ.ವಿಜಯಭಾಸ್ಕರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಪ್ರಧಾನಮಂತ್ರಿಗಳ 15 ಅಂಶಗಳ ಕಾರ್ಯಕ್ರಮದ 15ನೇ ರಾಜ್ಯಮಟ್ಟದ ಪ್ರಗತಿ ಪರಿಶೀಲನಾ ಸಭೆಯ ನಡವಳಿ**

**ಸಭೆಯಲ್ಲಿ ಹಾಜರಿದ್ದವರ ಪಟ್ಟಿ ಲಗತ್ತಿಸಿದೆ :**

- ಸಭೆ ಪ್ರಾರಂಭವಾಗುತ್ತಿದ್ದಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳಾದ ಶ್ರೀ ಮೊಹಮ್ಮದ್ ಮೊಹಸಿನ್, ಭಾ.ಆ.ಸೇ., ಇವರು ರಾಜ್ಯದ ಮುಖ್ಯ ಕಾರ್ಯದರ್ಶಿಗಳಾದ ಶ್ರೀ ಟಿ.ಎಂ.ವಿಜಯಭಾಸ್ಕರ್, ಭಾ.ಆ.ಸೇ., ಇವರನ್ನು ಸ್ವಾಗತಿಸಿದರು. ಅಂತೆಯೇ ಮಾನ್ಯ ಶಾಸಕರಾದ ಶ್ರೀಮತಿ ಕನೀಜ್ ಫಾತಿಮ ಅವರನ್ನು ಮತ್ತು ಸಭೆಯಲ್ಲಿ ಭಾಗವಹಿಸಿದ್ದ ಎಲ್ಲಾ ಅಧಿಕಾರಿ ವೃಂದ ಮತ್ತು ಅಧಿಕಾರೇತರ ಸದಸ್ಯರುಗಳಿಗೆ ಸ್ವಾಗತ ಕೋರಿದರು.

1. ಮೊದಲಿಗೆ ದಿನಾಂಕ: 13.7.2017ರ ಸಭೆಯಲ್ಲಿ ಕೈಗೊಂಡ ನಿರ್ಣಯಗಳ ಬಗ್ಗೆ ಕೈಗೊಂಡಿರುವ ಕ್ರಮಗಳನ್ನು ಪರಿಶೀಲಿಸಿದ ಮುಖ್ಯಕಾರ್ಯದರ್ಶಿಗಳು ಪ್ರಧಾನಮಂತ್ರಿಗಳ 15 ಅಂಶಗಳ ಕಾರ್ಯಕ್ರಮದ ಪ್ರಗತಿಪರಿಶೀಲನಾ ಸಭೆ ನಡೆಸುತ್ತಿರುವುದರ ಮುಖ್ಯ ಉದ್ದೇಶ ಎಲ್ಲಾ ಇಲಾಖೆಗಳಲ್ಲಿನ ಫಲಾನುಭವಿ ಯೋಜನೆಗಳಲ್ಲಿ ಶೇ.15ರಷ್ಟು ಅಲ್ಪಸಂಖ್ಯಾತರಿಗೆ ತಲುಪುತ್ತಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಲು ತಿಳಿಸಿದರು.

(ಕ್ರಮ: ಎಲ್ಲಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು)

2. ಉದ್ಯೋಗ ಮತ್ತು ತರಬೇತಿ ಇಲಾಖೆಯಿಂದ ಮಾಹಿತಿ ಸಲ್ಲಿಕೆಯಾಗದಿರುವುದನ್ನು ಗಮನಿಸಿದ ಮುಖ್ಯಕಾರ್ಯದರ್ಶಿಗಳು ಅಯವ್ಯಯದಿಂದ ಒದಗಿಸಲಾಗಿರುವ ಅನುದಾನದಲ್ಲಿ ಶೇ.15ರಷ್ಟನ್ನು ಅಲ್ಪಸಂಖ್ಯಾತರಿಗೆ ಗುರಿ ಇಟ್ಟು ಗುರಿ ಸಾಧಿಸಲು ಸೂಚಿಸಿದರು.

(ಕ್ರಮ: ಕಾರ್ಯದರ್ಶಿ, ಕಾರ್ಮಿಕ ಇಲಾಖೆ)

3. ಉರ್ದು ಶಾಲೆಗಳನ್ನು ಉನ್ನತೀಕರಣಗೊಳಿಸುವ ಬಗ್ಗೆ ಯಾವುದೇ ಕ್ರಮಗಳನ್ನು ಕೈಗೊಳ್ಳದಿರುವುದನ್ನು ಗಮನಿಸಿದ ಮುಖ್ಯಕಾರ್ಯದರ್ಶಿಗಳು ಈಗಾಗಲೇ ಸರ್ಕಾರದಿಂದ 9 ಶಾಲೆಗಳ ಉನ್ನತೀಕರಣಕ್ಕೆ ಅನುಮೋದನೆ ದೊರೆತಿದ್ದು ಅದರಲ್ಲಿ ಒಂದು ಶಾಲೆಯನ್ನಾದರೂ ಕೂಡಲೇ ಉನ್ನತೀಕರಣಗೊಳಿಸಬೇಕೆಂದು ಸೂಚಿಸುತ್ತಾ ಅಗತ್ಯವಿದ್ದಲ್ಲಿ ಸಂಬಂಧಪಟ್ಟ ಸಮಿತಿಯ ಮುಂದೆ ಉಳಿದ ಶಾಲೆಗಳ ಉನ್ನತೀಕರಣಕ್ಕೆ ಸೂಕ್ತ ಪ್ರಸ್ತಾವನೆ ಸಲ್ಲಿಸುವಂತೆ ತಿಳಿಸಿದರು.

(ಕ್ರಮ: ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ/ ಕಾರ್ಯದರ್ಶಿ, ಅಲ್ಪಸಂಖ್ಯಾತ ವರ್ಗಗಳ ಕಲ್ಯಾಣ ಇಲಾಖೆ)

4. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಅಂಗನವಾಡಿ ಕಾರ್ಯಕರ್ತೆಯರ ನೇಮಕಾತಿಯಲ್ಲಿ ಸರ್ಕಾರವು ಸೂಕ್ತ ಮಾನದಂಡಗಳನ್ನು ವಿಧಿಸಿದ್ದು ಅದರನ್ವಯ ಎಲ್ಲೆಲ್ಲಿ ಅಲ್ಪಸಂಖ್ಯಾತರ ಜನಸಂಖ್ಯೆ ಶೇ.25ಕ್ಕಿಂತಲೂ ಹೆಚ್ಚಿರುತ್ತದೋ ಅಂತಹ ಸ್ಥಳಗಳಲ್ಲಿನ

ಅಂಗನವಾಡಿ ಕೇಂದ್ರಗಳಿಗೆ ನೇಮಕವಾಗುವ ಕಾರ್ಯಕರ್ತೆಯರು ಕಡ್ಡಾಯವಾಗಿ ಅಲ್ಪಸಂಖ್ಯಾತ ಭಾಷೆಯನ್ನೂ ಬಲ್ಲವರಾಗಿರಬೇಕು. ಯಾವ ಕೇಂದ್ರಗಳಲ್ಲಿ ಮಕ್ಕಳ ದಾಖಲಾತಿ 20ಕ್ಕಿಂತಲೂ ಕಡಿಮೆ ಇದೆಯೋ ಅಂತಹ ಅಂಗನವಾಡಿ ಕೇಂದ್ರಗಳನ್ನು ಬೇರೆಡೆಗೆ ಸ್ಥಳಾಂತರಗೊಳಿಸಿ ವಿಲೀನಗೊಳಿಸಬೇಕಿದೆ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯ ಕಾರ್ಯದರ್ಶಿಗಳು, ಕೇಂದ್ರಗಳ ವಿಲೀನ ಪ್ರಕ್ರಿಯೆಯಿಂದ ಮಕ್ಕಳಿಗೆ ತೊಂದರೆಯಾಗುವ ಸಾಧ್ಯತೆಗಳೇ ಹೆಚ್ಚಿದ್ದು ಮಕ್ಕಳ ದಾಖಲಾತಿ ಐದು ಅಥವಾ ಅದಕ್ಕಿಂತಲೂ ಕಡಿಮೆಯಿರುವ ಅಂಗನವಾಡಿ ಕೇಂದ್ರಗಳನ್ನು ಗುರುತಿಸಿ ಅವುಗಳನ್ನು ನಗರ ಪ್ರದೇಶಕ್ಕೆ ಸ್ಥಳಾಂತರಗೊಳಿಸಲು ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು. ಅಂತೆಯೇ ಬೆಂಗಳೂರು ಹೊರವಲಯದಲ್ಲಿರುವ ಪ್ರವೇಶಗಳು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಗುರುತಿಸಲಾಗಿದ್ದು, ಅಲ್ಲಿಯು ಹೊಸ ಅಂಗನವಾಡಿಗಳು ಪ್ರಾರಂಭಿಸಬೇಕೆಂದು ತಿಳಿಸಿದರು. ಅಧಿಕಾರೇತರ ಸದಸ್ಯರಾದ ಶ್ರೀ ನಿಸಾರ್ ಅಹಮದ್ ಅವರು ಕೊಳಚೆ ಪ್ರದೇಶಗಳಲ್ಲಿರುವ ಅಂಗನವಾಡಿ ಕೇಂದ್ರಗಳು, ಅಲ್ಲಿ ಕಾರ್ಯನಿರ್ವಹಿಸುತ್ತಿರುವವರ ಮಾಹಿತಿಯನ್ನು ನೀಡಿದಲ್ಲಿ ತಮ್ಮ ಸೇವಾ ಸಂಸ್ಥೆಯ ಮೂಲಕ ಅಂತಹ ಅಂಗನವಾಡಿ ಕೇಂದ್ರಗಳನ್ನು ಅಭಿವೃದ್ಧಿಪಡಿಸಲು ನೆರವು ನೀಡಲಾಗುವುದೆಂದು ತಿಳಿಸಿದರು.

(ಕ್ರಮ: ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ)

5. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಯೋಜನೆಗಳಲ್ಲಿ ಶೇ.15ರಷ್ಟು ಅಲ್ಪಸಂಖ್ಯಾತರಿಗೆ ಫಲಾನುಭವಿಗಳಿಗೆ ದೊರೆಯುವಂತೆ ಗುರಿ ನಿಗದಿಪಡಿಸಿಕೊಂಡು ಐಸಿಡಿಎಸ್ ಮತ್ತು ಇತರೆ ಯೋಜನೆಗಳಲ್ಲಿ ಮೂಲಸೌಕರ್ಯಗಳನ್ನೂ ಒಳಗೊಂಡಂತೆ ಯೋಜನೆಯ ಫಲಿತವು ಅಲ್ಪಸಂಖ್ಯಾತರಿಗೆ ಸಿಗುವ ರೀತಿಯಲ್ಲಿ ಕಾರ್ಯನಿರ್ವಹಿಸುವಂತೆ ನಿರ್ದೇಶನ ನೀಡಿದರು. ಇದಕ್ಕೆ ಪ್ರತಿಕ್ರಯಿಸಿದ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಕೂಡಲೇ ಕ್ರಮವಹಿಸುವುದಾಗಿ ತಿಳಿಸಿದರು.

(ಕ್ರಮ: ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ/
ಕಾರ್ಯದರ್ಶಿ, ಅಲ್ಪಸಂಖ್ಯಾತ ವರ್ಗಗಳ ಕಲ್ಯಾಣ ಇಲಾಖೆ)

6. ಶಿಕ್ಷಣ ಇಲಾಖೆಯ ಪರಿಶೀಲನೆ ನಡೆಸಿದ ಮುಖ್ಯಕಾರ್ಯದರ್ಶಿಗಳು ಶಾಲೆಗಳಲ್ಲಿ ಹೆಚ್ಚುವರಿ ತರಗತಿ ಕೊಠಡಿಗಳನ್ನು ನಿರ್ಮಾಣ ಮಾಡುವುದಕ್ಕೆ ಸಂಬಂಧಿಸಿದಂತೆ ಅಲ್ಪಸಂಖ್ಯಾತರಿಗಾಗಿ ನಿಗದಿಪಡಿಸಿರುವ ಗುರಿಯಲ್ಲಿ ಬಾಲಕರ ಹಾಗೂ ಬಾಲಕಿಯರ ಶೌಚಾಲಯಗಳನ್ನು ನಿರ್ಮಾಣ ಮಾಡುವುದಕ್ಕೆ ಸಂಬಂಧಿಸಿದಂತೆ ಯಾವುದೇ ಗುರಿ ನಿಗದಿಪಡಿಸದಿರುವ ಬಗ್ಗೆ ಪ್ರಶ್ನಿಸಿದರು. ನಿಯೋಜಿತ ಅಧಿಕಾರಿಯು ಉತ್ತರಿಸಲು ವಿಫಲರಾದರು. ಇದಕ್ಕೆ ಪ್ರತಿಕ್ರಿಯಿಸಿದ ಸಮಿತಿಯ ಅಧಿಕಾರೇತರ ಸದಸ್ಯರಾದ ಶ್ರೀ ಮಹೇಂದ್ರ.ಹೆಚ್.ಸಿಂಗ್ ಅವರು ಪ್ರಧಾನಮಂತ್ರಿಗಳ 15 ಅಂಶಗಳ ಯೋಜನೆ ಕಾರ್ಯಕ್ರಮವು ಅತ್ಯಂತ ಪ್ರಮುಖವಾದುದ್ದಾಗಿದ್ದು ಇದರ ಪ್ರಗತಿ ಪರಿಶೀಲನೆ ಸಭೆಗೆ ಇಲಾಖೆಯ ಮುಖ್ಯಸ್ಥರು ಗೈರು ಹಾಜರಾಗಿರುದಕ್ಕೆ ಆಕ್ಷೇಪ ವ್ಯಕ್ತಪಡಿಸುತ್ತಾ ಮುಖ್ಯಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಸಭೆ ನಡೆಯುತ್ತಿದ್ದರೂ ಪೂರಕ ಮತ್ತು ಸಮಗ್ರ ಮಾಹಿತಿಯೊಂದಿಗೆ ಅಧಿಕಾರಿಗಳು ವಿವರಣೆ ನೀಡಲು ವಿಫಲರಾಗಿರುವುದನ್ನು ಮತ್ತು ಸಭೆಗೆ ಗೈರು ಹಾಜರಾಗಿರುವುದನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಕೋರಿದರು.

(ಕ್ರಮ: ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ/
ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ)

7. ಉರ್ದು ಶಿಕ್ಷಕರ ನೇಮಕಾತಿಯ ಬಗ್ಗೆ ಪ್ರಸ್ತಾಪಿಸಿದ ಮುಖ್ಯ ಕಾರ್ಯದರ್ಶಿಗಳು ಮಂಜೂರಾತಿ ದೊರತಿರುವ 10 ಸಾವಿರ ಶಿಕ್ಷಕರ ಹುದ್ದೆಗಳಲ್ಲಿ ಉರ್ದು, ತಮಿಳು, ತೆಲುಗು, ಮರಾಠಿ ಭಾಷಿಯ ಅಲ್ಪಸಂಖ್ಯಾತರ ಹುದ್ದೆಗಳ ನೇಮಕಾತಿಯಾಗದೇ ಇರುವುದನ್ನು ಗಮನಿಸಿ, ಕೂಡಲೆ ಕ್ರಮ ವಹಿಸಿ, ಸಭೆಗೆ ಸಂಪೂರ್ಣ ಮಾಹಿತಿಯೊಂದಿಗೆ ಹಾಜರಾಗಲು **ಸಾರ್ವಜನಿಕ ಶಿಕ್ಷಣ ಇಲಾಖೆಯ** ಪ್ರತಿನಿಧಿಯಾದ ಆರ್.ಎಂ.ಎಸ್.ಇ ನಿರ್ದೇಶಕರನ್ನು ಎಚ್ಚರಿಸಿದರು.

(ಕ್ರಮ: ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ)

8. ರಾಜೀವಗಾಂಧಿ ಚೈತನ್ಯ ಯೋಜನೆ ಮತ್ತು ಆರ್.ಎಸ್.ಇ.ಟಿ.ಐ. ಯೋಜನೆಯ ಪ್ರಗತಿ ಪರಿಶೀಲನೆ ನಡೆಸಿದ ಮುಖ್ಯಕಾರ್ಯದರ್ಶಿಗಳು 2017-18ರ ಆರ್ಥಿಕ ವರ್ಷದ ಮಾರ್ಚ್ 31, 2018ರ ಅಂತ್ಯಕ್ಕೆ ಹಾಗು ತ್ರೈಮಾಸಿಕ ವರ್ಷದ ಜೂನ್ 2018ರ ಅಂತ್ಯಕ್ಕೆ ಒದಗಿಸಿರುವ ಮಾಹಿತಿ ತಪ್ಪಾಗಿರುವುದನ್ನು ಗಮನಿಸಿ ಈ ಬಗ್ಗೆ ಪರಿಶೀಲಿಸಿ ಸರಿಯಾದ ಮಾಹಿತಿಯೊಂದಿಗೆ ವರದಿಯನ್ನು ಸಲ್ಲಿಸಲು ತಿಳಿಸಿದರು.

(ಕ್ರಮ:ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ)

9. ಪ್ರತಿಯೊಂದು ಇಲಾಖೆಯು ವರ್ಷದ ಪ್ರಾರಂಭದಲ್ಲಿ ಇಲಾಖೆಗೆ ಮಂಜೂರಾಗಿರುವ ಫಲಾನುಭವಿ ಆಧಾರಿತ ಯೋಜನೆಗಳಲ್ಲಿ ಭೌತಿಕ ಗುರಿಯಲ್ಲಿ ಅಲ್ಪಸಂಖ್ಯಾತರಿಗೆ ಶೇ.15ರಷ್ಟನ್ನು ಗುರಿ ನಿಗದಿಪಡಿಸಿ ಯೋಜನೆಯ ಪ್ರಗತಿಯನ್ನು ಕಾಲಕಾಲಕ್ಕೆ ಪರಿಶೀಲಿಸಬೇಕೆಂದು ತಿಳಿಸಿದರು. ಪ್ರಧಾನಮಂತ್ರಿಗಳ 15 ಅಂಶಗಳ ಕಾರ್ಯಕ್ರಮದ ಪ್ರಗತಿ ಪರಿಶೀಲನೆಯ ವಿಷಯವನ್ನು ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮದ ಸಭೆಯಲ್ಲಿ ಇನ್ನು ಮುಂದೆ ಚರ್ಚೆಗೆ ತೆಗೆದುಕೊಳ್ಳಲು ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಯಿತು.

(ಕ್ರಮ: ಪ್ರಧಾನ ಕಾರ್ಯದರ್ಶಿ, ಯೋಜನೆ ಇಲಾಖೆ)

10. ತಾಂತ್ರಿಕ ಶಿಕ್ಷಣದ ಮೂಲಕ ಕೌಶಲ್ಯಾಭಿವೃದ್ಧಿಯ ಬಗ್ಗೆ ಪರಿಶೀಲಿಸಿದ ಮುಖ್ಯಕಾರ್ಯದರ್ಶಿಗಳು ಅಲ್ಪಸಂಖ್ಯಾತರ ಜನಸಂಖ್ಯೆಗನುಸಾರವಾಗಿ ಯೋಜನೆಯ ಫಲಿತ ದೊರೆಯುವಂತೆ ಇಲಾಖೆಗಳು ಬದ್ಧವಾಗಿರಬೇಕೆಂದು ತಿಳಿಸಿದರು. ಈ ಬಗ್ಗೆ ಉಪಕಾರ್ಯದರ್ಶಿಗಳಿಗೆ ಸೂಚನೆ ನೀಡಿದ ಮುಖ್ಯಕಾರ್ಯದರ್ಶಿಗಳು ಉದಾಹರಣೆಯೊಂದಿಗೆ ವಿವರಿಸುತ್ತಾ, ಬೀದರ್ ಜಿಲ್ಲೆಯಲ್ಲಿ ಶೇ.20ರಷ್ಟು ಅಲ್ಪಸಂಖ್ಯಾತರ ಜನಸಂಖ್ಯೆಯಿದ್ದರೆ ಐಟಿಐ ಕೇಂದ್ರಗಳಲ್ಲಿ ಶೇ.20ರಷ್ಟು ಅಲ್ಪಸಂಖ್ಯಾತರು ದಾಖಲಾತಿ ಹೊಂದುವ ಗುರಿ ಇರಬೇಕು. ಅದರಂತೆಯೇ ಕಲಬುರಗಿ ಜಿಲ್ಲೆಯಲ್ಲಿ ಶೇ.25ರಷ್ಟು ಅಲ್ಪಸಂಖ್ಯಾತರಿದ್ದರೆ ಐಟಿಐ ಕೇಂದ್ರಗಳಲ್ಲಿ ಶೇ.25ರಷ್ಟು ದಾಖಲಾತಿ ಗುರಿ ಇರಬೇಕು ಎಂದು ಹೇಳಿದರು.

(ಕ್ರಮ: ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ/
ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ ಇಲಾಖೆ)

11. ಕರ್ನಾಟಕ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದ ಯೋಜನೆಗಳ ಪ್ರಗತಿಯು ಅತ್ಯಾಲ್ಪವಾಗಿರುವುದನ್ನು ಗಮನಿಸಿದ ಮುಖ್ಯ ಕಾರ್ಯದರ್ಶಿಗಳು ಯೋಜನೆಯ ಸಂಪೂರ್ಣ ಪ್ರಗತಿ ಸಾಧನೆಗೆ ನಿಗಮವು ಹೆಚ್ಚು ಶ್ರಮವಹಿಸಬೇಕೆಂದು ತಿಳಿಸಿದರು.

(ಕ್ರಮ: ಕಾರ್ಯದರ್ಶಿ, ಅಲ್ಪಸಂಖ್ಯಾತ ವರ್ಗಗಳ ಕಲ್ಯಾಣ ಇಲಾಖೆ)

12. ಸರ್ಕಾರಿ ಸ್ವಾಮ್ಯದ ಇಲಾಖೆ / ಉದ್ದಿಮೆಗಳಲ್ಲಿನ ನೇಮಕಾತಿಯಲ್ಲಿ ಅಲ್ಪಸಂಖ್ಯಾತರ ಪ್ರಾತಿನಿಧ್ಯಕ್ಕೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳಲ್ಲಿ ಶೇ.3 ರಿಂದ 5ರಷ್ಟು ವ್ಯತ್ಯಯವಿದ್ದು ಕ.ರಾ.ರ.ಸಾರಿಗೆ ಸಂಸ್ಥೆ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಬೆಸ್ಕಾಂ, ಕೆಪಿಟಿಸಿಎಲ್ ನಿಗಮಗಳಲ್ಲಿ ಸಿ ಮತ್ತು ಡಿ ವೃಂದದ ಹುದ್ದೆಗಳಲ್ಲಿ ಅಲ್ಪಸಂಖ್ಯಾತರ ಪ್ರಾತಿನಿಧ್ಯದ ಶೇಕಡವಾರು ವಿವರವನ್ನು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳು ಸಭೆಗೆ ಮಾಹಿತಿ ನೀಡಿದರು. ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಿಂದ ಮಾತ್ರ ಮಾಹಿತಿಯನ್ನು ಕ್ರೂಢೀಕರಿಸಿದ್ದು ಸರ್ಕಾರದ ಎಲ್ಲಾ ಇಲಾಖೆಗಳಿಂದಲೂ ಮಾಹಿತಿಯನ್ನು ಸಂಗ್ರಹಿಸಿ ಸಲ್ಲಿಸುವಂತೆ ಮುಖ್ಯಕಾರ್ಯದರ್ಶಿಗಳು ಸೂಚನೆ ನೀಡಿದರು. ಯಾವ ಸರ್ಕಾರಿ ಸಂಸ್ಥೆಯಲ್ಲಿ 1000 ಗಿಂತ ಹೆಚ್ಚು ನೌಕರರಿರುತ್ತಾರೋ ಅಂತಹ ಸಂಸ್ಥೆಗಳನ್ನೂ ಸಹ ಮುಂದಿನ ಸಭೆಗೆ ಆಹ್ವಾನಿಸುವಂತೆ ತಿಳಿಸಿದರು.

(ಕ್ರಮ: ಕಾರ್ಯದರ್ಶಿ, ಅಲ್ಪಸಂಖ್ಯಾತ ವರ್ಗಗಳ ಕಲ್ಯಾಣ ಇಲಾಖೆ)

13. ವಸತಿ ಇಲಾಖೆಗೆ ಸಂಬಂಧಿಸಿದಂತೆ ರಾಜೀವಗಾಂಧಿ ವಸತಿ ನಿಗಮದ ಪ್ರತಿನಿಧಿಯು ಸಭೆಗೆ ಮಾಹಿತಿಯನ್ನು ನೀಡುತ್ತಾ, 2011ರ ಕೇಂದ್ರ ಸರ್ಕಾರದ ಸಮಾಜೋ-ಆರ್ಥಿಕ ಗಣತಿಯ ಮೂಲಕ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿರುವುದಾಗಿ ತಿಳಿಸಿದರು. ಮುಖ್ಯ ಕಾರ್ಯದರ್ಶಿಗಳು ರಾಜೀವ್ ಗಾಂಧಿ ವಸತಿ ನಿಗಮದಿಂದ ಶೇ.15ರಷ್ಟು ಅಲ್ಪಸಂಖ್ಯಾತರಿಗೆ ಗೃಹ ಮಂಜೂರು ಮಾಡುವ ಗುರಿ ಹೊಂದಲು ಹಾಗೂ ಅಗತ್ಯವಿದ್ದಲ್ಲಿ ಅಲ್ಪಸಂಖ್ಯಾತರ ಜನಸಂಖ್ಯೆಗೆ ಅನುಗುಣವಾಗಿ ಹೆಚ್ಚಿಸಬೇಕೆಂದು ತಿಳಿಸುತ್ತಾ ಶೇ.15ರ ಗುರಿನಿಗದಿಪಡಿಸಿಕೊಂಡು ನಗರ ಪ್ರದೇಶಗಳಿಗೂ ಯೋಜನೆಯನ್ನು ವಿಸ್ತಾರಗೊಳಿಸುವಂತೆ ತಿಳಿಸಿದರು.

(ಕ್ರಮ: ಕಾರ್ಯದರ್ಶಿ, ವಸತಿ ಇಲಾಖೆ)

14. ಕೊಳಚೆ ಪ್ರದೇಶಗಳಲ್ಲಿ ವಾಸಿಸುವ ಅಲ್ಪಸಂಖ್ಯಾತ ಸಮುದಾಯಗಳ ಶ್ರೇಯೋಭಿವೃದ್ಧಿ ಬಗ್ಗೆ ಪರಿಶೀಲಿಸಲಾಗಿ, ಕೊಳಚೆ ಪ್ರದೇಶಗಳಲ್ಲಿ ಶೌಚಾಲಯಗಳನ್ನು ನಿರ್ಮಾಣ ಮಾಡಲು ಆಯವ್ಯಯದಲ್ಲಿ ಅನುದಾನದ ಲಭ್ಯತೆಯನ್ನು ಕಲ್ಪಿಸಿಕೊಳ್ಳುವಂತೆ ಸಂಬಂಧಪಟ್ಟವರಿಗೆ ಮುಖ್ಯಕಾರ್ಯದರ್ಶಿಗಳು ಸೂಚಿಸಿದರು. ಶ್ರೀ ನಿಸಾರ್ ಅಹಮದ್ ಅವರು ಮಾತನಾಡುತ್ತಾ, ಸದರಿ ಯೋಜನೆಗಳನ್ನು ಪರಿವೀಕ್ಷಿಸಲು ರಾಜ್ಯ ಸಮಿತಿಯಲ್ಲಿರುವ ಆಯ್ದ ಸದಸ್ಯರನ್ನೊಳಗೊಂಡ ಉಪ ಸಮಿತಿಯನ್ನು ರಚಿಸುವಂತೆ ಸಂಬಂಧಪಟ್ಟ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡುವಂತೆ ಮುಖ್ಯಕಾರ್ಯದರ್ಶಿಗಳನ್ನು ಕೋರಿದರು. ಮುಖ್ಯಕಾರ್ಯದರ್ಶಿಗಳು ಈ ಸಂಬಂಧ ಪರಿಶೀಲನಾ ಸಭೆಗಳನ್ನು ನಡೆಸುವಂತೆ ಹಾಗೂ ಸದರಿ ಸಭೆಗಳಿಗೆ ಪರಿಶೀಲನಾ ಸಮಿತಿಯ ಸದಸ್ಯರನ್ನೂ ಆಹ್ವಾನಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳಿಗೆ ನಿರ್ದೇಶನ ನೀಡಿದರು. ಪರಿಶೀಲನಾ ಸಭೆಯನ್ನು ಮುಂದಿನ ತಿಂಗಳು ಆಯೋಜಿಸುವಂತೆ ಹಾಗೂ ಸದರಿ ಸಭೆಗೆ ಎಲ್ಲಾ ಇಲಾಖೆಯವರು ಅಲ್ಪಸಂಖ್ಯಾತರ ಅಭಿವೃದ್ಧಿಗೆ ಸಂಬಂಧಿಸಿದಂತೆ ಯೋಜನೆಯ ಸಂಪೂರ್ಣ ವಿವರಗಳನ್ನು ಗುರಿಸಾಧನೆಯ ಅಂಕಿಅಂಶಗಳೊಂದಿಗೆ ಸಲ್ಲಿಸುವಂತೆ ತಿಳಿಸಲು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳಿಗೆ ಮುಖ್ಯಕಾರ್ಯದರ್ಶಿಗಳು ಸೂಚನೆ ನೀಡಿದರು.

(ಕ್ರಮ: ಕಾರ್ಯದರ್ಶಿ, ಅಲ್ಪಸಂಖ್ಯಾತ ವರ್ಗಗಳ ಕಲ್ಯಾಣ ಇಲಾಖೆ)

15. ಗೃಹ ಇಲಾಖೆಯ ಪ್ರಗತಿ ಪರಿಶೀಲನೆ ನಡೆಸಲಾಗಿ, ಸೂಕ್ಷ್ಮ ಪರಿಸ್ಥಿತಿಯನ್ನು ನಿಭಾಯಿಸುವುದಕ್ಕೆ ಸಂಬಂಧಿಸಿದಂತೆ ಕೆಳಹಂತದ ಪೊಲೀಸ್ ಅಧಿಕಾರಿಗಳಿಗೆ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆಯೇ ಎಂದು ಮುಖ್ಯಕಾರ್ಯದರ್ಶಿಗಳು ಗೃಹ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರನ್ನು ಪ್ರಶ್ನಿಸಿದರು. ಇದಕ್ಕೆ ಪ್ರತಿಸ್ಪಂದಿಸಿದ ಶ್ರೀ ನಿಸಾರ್ ಅಹಮದ್ ಅವರು ಡಿವೈಎಸ್ಪಿ ಹಂತದ ಕೆಳಗಿನ ಎಲ್ಲಾ ಪೊಲೀಸ್ ಅಧಿಕಾರಿಗಳಿಗೂ ಈ ನಿಟ್ಟಿನಲ್ಲಿ ತರಬೇತಿಯ ಅವಶ್ಯಕತೆಯಿರುವುದಾಗಿ ತಿಳಿಸಿದರು. ಪ್ರಾಥಮಿಕ ಹಂತದಲ್ಲಿ ಈ ತರಬೇತಿ ಕಾರ್ಯಕ್ರಮವನ್ನು ವಲಯವಾರು ಡಿವೈಎಸ್ಪಿ ಮತ್ತು ಇನ್ಸ್‌ಪೆಕ್ಟರ್ ಹಂತದ ಅಧಿಕಾರಿಗಳಿಗೆ ಆಯೋಜಿಸುವಂತೆ ತಿಳಿಸಿದರು. <u>ಡಿವೈಎಸ್ಪಿ ಮತ್ತು ಕೆಳಗಿನ ಹಂತದ ಅಧಿಕಾರಿಗಳಿಗೆ ಪ್ರಶಿಕ್ಷಣ ಕಾರ್ಯಗಾರವನ್ನು ಹಮ್ಮಿಕೊಳ್ಳಲು ಗುರಿನಿಗದಿಪಡಿಸುವಂತೆ ಗೃಹ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಮುಖ್ಯಕಾರ್ಯದರ್ಶಿಗಳು ಇದಕ್ಕಾಗಿ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯ ಸಹಕಾರ ಪಡೆಯುವಂತೆ ಸೂಚಿಸಿದರು.</u>

(ಕ್ರಮ: ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ/
ಕಾರ್ಯದರ್ಶಿ, ಅಲ್ಪಸಂಖ್ಯಾತ ವರ್ಗಗಳ ಕಲ್ಯಾಣ ಇಲಾಖೆ)

16. ಧ್ವಜಾರೋಹಣದ ಪ್ರಕರಣದಲ್ಲಿ ಸಮಾಜಘಾತುಕ ವ್ಯಕ್ತಿಗಳು ಖುಲಾಸೆಯಾದ ಬಗ್ಗೆ ಪ್ರಸ್ತಾಪಿಸಿದ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳು, ಸಕ್ಷಮಪ್ರಾಧಿಕಾರಿಯಿಂದ ಪೂರ್ವಾನುಮತಿ ಪಡೆಯದ ಕಾರಣ ಆರೋಪಿಗಳು ಖುಲಾಸೆಯಾಗಲು ಕಾರಣವಾಯಿತೆಂದು ತಿಳಿಸುತ್ತಾ ಕರ್ತವ್ಯಲೋಪವೆಸಗಿದ ಸಂಬಂಧಪಟ್ಟ ಪೊಲೀಸ್ ಅಧಿಕಾರಿಯ ವಿರುದ್ಧ ತನಿಖೆ ನಡೆಸಬೇಕೆಂದು ಹೇಳಿದರು. ತದನಂತರ ಸಂಬಂಧಪಟ್ಟ ಆರೋಪಿಗಳು ಗೌರಿ ಲಂಕೇಶ್ ಹತ್ಯೆ ಪ್ರಕರಣದಲ್ಲಿ ಬಂಧಿತರಾಗಿದ್ದನ್ನು ಕಾರ್ಯದರ್ಶಿಗಳು ತಿಳಿಸಿದರು. ಮುಖ್ಯಕಾರ್ಯದರ್ಶಿಗಳು ಕೋಮುಗಲಭೆ ಪ್ರಕರಣಗಳ ಇತ್ಯರ್ಥಕ್ಕಾಗಿ ವಿಶೇಷ ನ್ಯಾಯಾಲಯಗಳನ್ನು ಸ್ಥಾಪಿಸಲಾಗಿದೆಯೇ ಎಂದು ಪ್ರಶ್ನಿಸಿದರು. ಇದಕ್ಕೆ ಉತ್ತರಿಸಿದ ಸರ್ಕಾರದ ಅಪರಮುಖ್ಯಕಾರ್ಯದರ್ಶಿಗಳು ಈ ಕುರಿತು ಎಡಿಜಿಪಿ (ಅಪರಾಧ)ಯೊಡನೆ ಚರ್ಚಿಸುವುದಾಗಿ ತಿಳಿಸಿದರು.

(ಕ್ರಮ: ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ)

17. ಶ್ರೀ ಅಬ್ದುಲ್ ಸುಬಾನ್, ಅಧಿಕಾರೇತರ ಸದಸ್ಯರು, ಇವರು ಅಲ್ಪಸಂಖ್ಯಾತರ ವಿರುದ್ಧ ಸುಳ್ಳು ಪ್ರಕರಣಗಳನ್ನು ದಾಖಲಿಸುತ್ತಿರುವುದರ ಬಗ್ಗೆ ಪ್ರಸ್ತಾಪಿಸುತ್ತಾ, ಕನ್ನಡ ದಿನಪತ್ರಿಕೆಯಾದ ವಾರ್ತಾಭಾರತಿ ಸಂಪಾದಕರನ್ನು ಸುಳ್ಳು ಪ್ರಕರಣದಲ್ಲಿ ಬಂಧಿಸಿ ಮೂರು ದಿನಗಳ ನಂತರ ಬಿಡುಗಡೆ ಮಾಡಿದ ಪ್ರಸಂಗವನ್ನು ಸಭೆಯ ಗಮನಕ್ಕೆ ತಂದು ಈ ರೀತಿ ಆಗಬಾರದೆಂದು ತಿಳಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು, ಗೃಹ ಇಲಾಖೆ, ಇವರು ಇದರ ಬಗ್ಗೆ ತಮ್ಮ ಬಳಿ ಮಾಹಿತಿಯಿಲ್ಲವೆಂದು ತಿಳಿಸುತ್ತಾ ಈ ಬಗ್ಗೆ ವಿಚಾರಣೆ ನಡೆಸಿ ಮಾಹಿತಿಯನ್ನು ನೀಡುವುದಾಗಿ ತಿಳಿಸಿದರು.

(ಕ್ರಮ: ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ)

18. ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲಾಮಟ್ಟದಲ್ಲಿ ನಡೆಯುವ ಸಭೆಗಳ ಮಾಹಿತಿ ಪರಿಶೀಲಿಸಿದ ಮುಖ್ಯಕಾರ್ಯದರ್ಶಿಗಳು ಕಳೆದ ಒಂದು ವರ್ಷದಲ್ಲಿ ಕೇವಲ ಒಂದೇ ಒಂದು ಸಭೆ ನಡೆಸಿರುವುದನ್ನು

ಗಮನಿಸಿದರಲ್ಲದೇ ಪ್ರಥಮ ತ್ರೈಮಾಸಿಕ ವರ್ಷದಲ್ಲಿ ಯಾವುದೇ ಸಭೆ ನಡೆಸಿಲ್ಲದಿರುವುದನ್ನೂ ಗಮನಿಸಿದರು. ಜಿಲ್ಲಾಮಟ್ಟದಲ್ಲಿ ಎಲ್ಲಾ ಜಿಲ್ಲಾಧಿಕಾರಿಗಳು ನಿಗದಿತ ಕಾಲಾವಧಿಯಲ್ಲಿ ನಿಯಮಿತವಾಗಿ ಸಭೆಗಳನ್ನು ನಡೆಸುವಂತೆ ಹಾಗೂ ಸದರಿ ವಿಷಯ ಪ್ರತಿ ತಿಂಗಳು ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆಯಲ್ಲಿ ತೆಗೆದುಕೊಳ್ಳಲು ಅರೆಸರ್ಕಾರಿ ಪತ್ರಗಳ ಮೂಲಕ ತಿಳಿಸುವಂತೆ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳಿಗೆ ಸರ್ಕಾರದ ಮುಖ್ಯಕಾರ್ಯದರ್ಶಿಗಳು ನಿರ್ದೇಶನ ನೀಡಿದರು.

(ಕ್ರಮ: ಕಾರ್ಯದರ್ಶಿ, ಅಲ್ಪಸಂಖ್ಯಾತ ವರ್ಗಗಳ ಕಲ್ಯಾಣ ಇಲಾಖೆ)

19. **ಬಹುವರ್ಗೀಯ ಅಭಿವೃದ್ಧಿ ಕಾರ್ಯಕ್ರಮಗಳಿಗೆ** ಸಂಬಂಧಿಸಿದಂತೆ ಕೈಗೊಂಡಿರುವ ಕ್ರಮಗಳು ಹಾಗೂ ವೆಚ್ಚಿಸಲಾದ ಅನುದಾನದ ಬಗ್ಗೆ ಪರಿಶೀಲನೆ ನಡೆಸಿದ ಮುಖ್ಯಕಾರ್ಯದರ್ಶಿಗಳು ಹುಮನಾಬಾದ್, ಚಿತ್ತಾಪುರ, ಸಿಂಧನೂರು ಮತ್ತು ಹೊಸಪೇಟೆಗಳಲ್ಲಿ ಅನುದಾನದ ಬಳಕೆ ಅತ್ಯಲ್ಪವಾಗಿದ್ದು ಸದರಿ ಕಾರ್ಯಕ್ರಮಕ್ಕೆ ಕಾರ್ಯಯೋಜನೆಗಳ ಸಿದ್ದತೆ ಮತ್ತು ಮಂಜೂರಾತಿಯ ಬಗ್ಗೆ ಪ್ರಶ್ನಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಜಂಟಿ ನಿರ್ದೇಶಕರು, ಯೋಜನೆಗಳನ್ನು ಸಮಿತಿಯ ಮುಂದೆ ಮಂಡಿಸಿ ಅನುಮೋದನೆ ಪಡೆದ ನಂತರ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳ ಮೂಲಕ ಸಲ್ಲಿಸಲಾಗುತ್ತದೆ ಎಂಬ ಮಾಹಿತಿಯನ್ನು ಸಭೆಗೆ ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯಕಾರ್ಯದರ್ಶಿಗಳು ಕಾರ್ಯಯೋಜನೆ ಕುರಿತು ಸಭೆಯನ್ನು ಕರೆದು ಸದಸ್ಯರೊಂದಿಗೆ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲು ತಿಳಿಸಿದರು. ಜಂಟಿ ನಿರ್ದೇಶಕರಿಗೆ ಸೂಚಿಸುತ್ತಾ, ಇದರಿಂದಾಗಿ ಯೋಜನೆಯನ್ನು ಮತ್ತಷ್ಟು ಅರ್ಥಪೂರ್ಣವಾಗಿ ಮಾಡಲು ಮತ್ತು ಫಲಾನುಭವಿಗಳನ್ನು ತಲುಪಲು ಹೆಚ್ಚು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

(ಕ್ರಮ: ಕಾರ್ಯದರ್ಶಿ, ಅಲ್ಪಸಂಖ್ಯಾತ ವರ್ಗಗಳ ಕಲ್ಯಾಣ ಇಲಾಖೆ)

(ಟಿ.ಎಂ.ವಿಜಯ್ ಭಾಸ್ಕರ್)
ಮುಖ್ಯ ಕಾರ್ಯದರ್ಶಿಗಳು